**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಪಿ. ನಂಜುಂಡಿ, ಇವರು ನಿಯಮ-72 ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ.**

**ವಿಷಯ:**

ರಾಜ್ಯ ಸರ್ಕಾರ ಪ್ರತಿ ವರ್ಷ ವಿವಿಧ ಸಮಾಜಗಳ ಜಯಂತಿಗಳನ್ನು ಆಚರಿಸುತ್ತಾ ಬರುತ್ತಿದ್ದು, ಈ ಎಲ್ಲಾ ಜಯಂತಿಗಳ ಆಚರಣೆಗೆ ಒದಗಿಸುತ್ತಿರುವ ಅನುದಾನದಲ್ಲಿ ತಾರತಮ್ಯವೆಸಗುತ್ತಿದೆ. ಜಾತಿವಾರು ಜಯಂತಿಗಳ ಆಚರಣೆಯಲ್ಲಿ ಬಲಿಷ್ಠ ಸಮಾಜದ ಜಯಂತಿಗಳಿಗೆ ಹೆಚ್ಚಿನ ಕಾಳಜಿ ಹಾಗೂ ಅನುದಾನವನ್ನು ಒದಗಿಸುವುದು, ಸಣ್ಣ ಸಣ್ಣ ಸಮಾಜದ ಜಯಂತಿಗಳ ಆಚರಣೆಗೆ ತಾತ್ಸಾರ ತೋರುವುದು ನಡೆದುಕೊಂಡು ಬಂದಿರುತ್ತದೆ. ಎಲ್ಲಾ ಜಯಂತಿಗಳನ್ನು ಶಿಷ್ಟಾಚಾರ ಪ್ರಕಾರ ನಡೆಸುತ್ತಿಲ್ಲದಿರುವ ರಾಜ್ಯ ಸರ್ಕಾರದ ಧೋರಣೆಯನ್ನು ಖಂಡಿಸುವ ಕುರಿತ ವಿಷಯದ ಬಗ್ಗೆ ನಿಯಮ-72ರಡಿಯಲ್ಲಿ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ:**

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ವಿವಿಧ ಮಹಾಪುರುಷರ 31 ಜಯಂತಿಗಳನ್ನು ರಾಜ್ಯಮಟ್ಟ, ಜಿಲ್ಲಾಮಟ್ಟ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಚರಣೆ ಮಾಡುತ್ತಿದ್ದು, ಆ ಮೂಲಕ ಮಹಾಪುರುಷರ ತತ್ವ ಸಂದೇಶಗಳನ್ನು ಹಾಗೂ ಜೀವನ ಆದರ್ಶಗಳನ್ನು ಸಮಾಜಕ್ಕೆ ಪರಿಚಯಿಸುವ ಕೆಲಸ ಮಾಡಲಾಗುತ್ತಿದೆ.

ರಾಜ್ಯಮಟ್ಟದ ಜಯಂತಿಗಳು ಬೆಂಗಳೂರಿಗೆ ಮಾತ್ರ ಸೀಮಿತವಾಗಿರುವುದನ್ನು ಬದಲಾಯಿಸಿ ಆಯಾ ಮಹಾಪುರುಷರು ಜನಿಸಿದ ಜನ್ಮ ಸ್ಥಾನ, ಅವರ ಕಾರ್ಯಕ್ಷೇತ್ರ ಅಲ್ಲದೆ ಆಯಾ ಮಹಾಪುರುಷರ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿರುವ ಜಿಲ್ಲೆಗಳಲ್ಲಿ ರಾಜ್ಯಮಟ್ಟದ ಜಯಂತಿಗಳನ್ನು 2022ನೇ ಸಾಲಿನಿಂದ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾ 114 ಕಸಧ 2022, ದಿನಾಂಕ: 25.04.2022ರನ್ವಯ ಮಹಾಪುರುಷರ ರಾಜ್ಯಮಟ್ಟದ ಜಯಂತಿ ಕಾರ್ಯಕ್ರಮಕ್ಕೆ ಆಯಾ ಜಿಲ್ಲಾಧಿಕಾರಿಗಳಿಗೆ ರೂ.5.00ಲಕ್ಷಗಳು, ಜಿಲ್ಲಾ ಮಟ್ಟದ ಜಯಂತಿ ಆಚರಣೆಗೆ ರೂ.50,000/- ಮತ್ತು ತಾಲ್ಲೂಕು ಮಟ್ಟದ ಆಚರಣೆಗೆ ರೂ.20,000/-ಗಳನ್ನು ಬಿಡುಗಡೆ ಮಾಡಲಾಗುತ್ತಿದ್ದು, ಎಲ್ಲಾ ಜಯಂತಿಗಳ ಆಚರಣೆಗೂ ಒಂದೇ ತೆರನಾದ ಅನುದಾನವನ್ನು ನೀಡಲಾಗುತ್ತಿದ್ದು, ಇದರಲ್ಲಿ ಯಾವುದೇ ತಾರತಮ್ಯವಿರುವುದಿಲ್ಲ. ಜಯಂತಿಗಳನ್ನು ಆಚರಣೆ ಮಾಡುವಾಗ ಶಿಷ್ಟಾಚಾರದಂತೆ ಆಮಂತ್ರಣ ಪತ್ರಗಳನ್ನು ಮುದ್ರಿಸಿ, ಗಣ್ಯರನ್ನು ಆಹ್ವಾನಿಸಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದೆ.

ಸಂಖ್ಯೆ: ಕಸಂವಾ 89 ಕವಿಸ 2022.

(ವಿ. ಸುನೀಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.